ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು - 572 103
ದೂರವಾಣಿ : 0816-2254546 0816-2255596, 0816-2255597 ಫ್ಯಾಕ್ಸ್ : 0816-2270719

ಸಂಖ್ಯೆ: ತುವಿ:ಕಾ.ಅ.ಪ2018–19: 807 ದಿನಾಂಕ:12.06.2019

ಸುತ್ತೋಲೆ

ವಿಷಯ: 2019–20 ನೇ ಶೈಕ್ಷಣಿಕ ಸಾಲಿಗೆ ಸ್ನಾತಕ ಪದವಿಗಳಿಗೆ ಮಾತ್ರ ಹೆಚ್ಚುವರಿ ಪ್ರವೇಶಮಿತಿಗೆ ಪ್ರಸ್ತಾವನೆ ಸಲ್ಲಿಸುವ ಕುರಿತು.

ಉಲ್ಲೇಖ : 1) ಈ ಕಚೇರಿ ಅಧಿಸೂಚನೆ ಸಂಖ್ಯೆ: ತುವಿ.ಕಾಅಪ.ಸಂಯೋಜನೆ-01:2018–19:2160 ದಿನಾಂಕ:19.09.2018

2) ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 12.06.2019

* * * *

2019–20ನೇ ಶೈಕ್ಷಣಿಕ ಸಾಲಿಗೆ ಹಾಲಿ ಅಸ್ತಿತ್ವದಲ್ಲಿರುವ ಸ್ನಾತಕ ಪದವಿ ಕೋರ್ಸ್‌ಗಳಿಗೆ ವಿಶ್ವವಿದ್ಯಾನಿಲಯವು ನಿಗದಿಪಡಿಸಿದ್ದ ಪ್ರವೇಶ ಮಿತಿ ಪೂರ್ಣಗೊಂಡ ನಂತರ ಸದರಿ ಕೋರ್ಸ್‌ಗಳಿಗೆ ಹೆಚ್ಚಿನ ಬೇಡಿಕೆ ಇರುವುದಾಗಿ ತಿಳಿಸಿ ಕೆಲವು ಕಾಲೇಜಿನ ಪ್ರಾಂಶುಪಾಲರುಗಳು ವಿಶ್ವವಿದ್ಯಾನಿಲಯಕ್ಕೆ ಮನವಿ ಸಲ್ಲಿಸಿರುತ್ತಾರೆ. **ಆದರೆ, ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59 (18) ರ ಅನುಸಾರ** ಸಂಯೋಜನೆ ಪ್ರಸ್ತಾವನೆ ಸಲ್ಲಿಸುವ ಪೂರ್ವದಲ್ಲಿಯೇ ಅವಶ್ಯವಿರುವ ಹೆಚ್ಚುವರಿ ಪ್ರವೇಶ ಮಿತಿಗೆ ಮನವಿ ಸಲ್ಲಿಸುವುದು ನಿಯಮವಾಗಿದ್ದ ಹಿನ್ನೆಲೆಯಲ್ಲಿ ಸದರಿ ಕಾಲೇಜುಗಳಿಗೆ ಹೆಚ್ಚುವರಿ ಪ್ರವೇಶ ಮಿತಿ ಮಂಜೂರು ಮಾಡಲು ಅವಕಾಶವಿರುವುದಿಲ್ಲ ಎಂದು ಈಗಾಗಲೇ ಕಾಲೇಜುಗಳಿಗೆ ತಿಳಿಸಲಾಗಿದೆ.

ಆದಾಗ್ಯೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಹಿಂದ ಹಾಗೂ ವಿದ್ಯಾರ್ಥಿಯ ದಾಖಲಾತಿ ಪ್ರಮಾಣವನ್ನು ಹೆಚ್ಚಿಸುವ ದೃಷ್ಟಿಯಿಂದ 2019–20ನೇ ಶೈಕ್ಷಣಿಕ ಸಾಲಿಗೆ ಮಾತ್ರ ಅನ್ವಯವಾಗುವಂತೆ ಸ್ನಾತಕ ಪದವಿ ಹೆಚ್ಚುವರಿ ಪ್ರವೇಶ ಮಿತಿಗೆ ಪ್ರಸ್ತಾವನೆಗಳನ್ನು ಆಹ್ವಾನಿಸಲಾಗಿದೆ.

ಈ ಸಂಬಂಧ ಉಲ್ಲೇಖ (1)ರ ಅಧಿಸೂಚನೆಯಲ್ಲಿ ನಿಗದಿಪಡಿಸಿರುವ ಅರ್ಜಿ ಶುಲ್ಕ ರೂ. 5,000.00 (ರೂ. ಐದು ಸಾವಿರ ಮಾತ್ರ), ಪ್ರವೇಶ ಮಿತಿ ಹೆಚ್ಚಳದ ಶುಲ್ಕ ಹಾಗೂ ವಿಶೇಷ ದಂಡ ಶುಲ್ಕ ರೂ. 50,000.00 (ರೂ. ಐವತ್ತು ಸಾವಿರಗಳು ಮಾತ್ರ)ಗಳನ್ನು ಪಾವತಿಸಿ ದಿನಾಂಕ:14.06.2019 ರಂದು ಸಂಜೆ 5.00 ಗಂಟೆಯೊಳಗಾಗಿ ವಿಶ್ವವಿದ್ಯಾನಿಲಯಕ್ಕೆ ಮನವಿಯನ್ನು ಸಲ್ಲಿಸಲು ಈ ಮೂಲಕ ತಿಳಿಸಲಾಗಿದೆ.

ನಂತರ ಬರುವ ಪ್ರಸ್ತಾವನೆಗಳನ್ನು ಪರಿಗಣಿಸಲಾಗುವುದಿಲ್ಲವೆಂದು ಮತ್ತೊಮ್ಮೆ ತಿಳಿಸಲಾಗಿದೆ.

12/06

ಕುಲಸಚಿವರು

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ

ಗೆ,

ಪ್ರಾಂಶುಪಾಲರು, ಘಟಕ ಮತ್ತು ಎಲ್ಲಾ ಸಂಯೋಜಿತ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಯವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು- ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು ಮತ್ತು e-mail ಮುಖಾಂತರ ಪ್ರಾಂಶುಪಾಲರಿಗೆ ಕಳುಹಿಸುವುದು.
3. ಕಛೇರಿ ಪ್ರತಿ.